# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 18 |
| ಸದಸ್ಯರ ಹೆಸರು | ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12.07.2018 |
| ಉತ್ತರಿಸುವ ಸಚಿವರು | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕೊಡಗು ಜಿಲ್ಲೆಯಲ್ಲಿರುವ ಮಡಿಕೇರಿ ತಾಲ್ಲೂಕಿನ ನಾಲ್ಕುನಾಡು ಅರಮನೆ ಪ್ರಸ್ತುತ ರಾಜ್ಯ ಸರ್ಕಾರದ ಸುಪರ್ದಿಯಲ್ಲಿದೆಯೇ; | ಹೌದು. |
| ಆ. | ಇದ್ದಲ್ಲಿ, ಸದರಿ ನಾಲ್ಕುನಾಡು ಅರಮನೆಯನ್ನು ಸುಸ್ಥಿತಿಯಲ್ಲಿ ಕಾಪಾಡಲು ಯಾವ ಕ್ರಮ ವಹಿಸಲಾಗಿದೆ. | ನಾಲ್ಕುನಾಡು ಅರಮನೆಯ ಪ್ರದೇಶದಲ್ಲಿ ಒತ್ತುವರಿಯಾಗಿದ್ದ ಪ್ರದೇಶವನ್ನು ಜಿಲ್ಲಾಡಳಿತ ಸಹಕಾರದೊಂದಿಗೆ ದಿನಾಂಕ 17/05/2012ರಂದು ತೆರವುಗೊಳಿಸಿ, ಈ ಭಾಗದಲ್ಲಿ 167.20ಮೀ. ಚೈನ್‌ಲಿಂಕ್ ಫೆನ್ಸಿಂಗ್ ಅನ್ನು ಅಳವಡಿಸಲಾಗಿದೆ. ಸೋಲಾರ್ ಲೈಟಿಂಗ್ ವ್ಯವಸ್ಥೆ, ಅರಮನೆಗೆ ಪಕ್ಷಿಗಳು ಒಳ ನುಸುಳದಂತೆ ರಕ್ಷಣೆಗೆ ನೈಲಾನ್ ನೆಟ್ ಅನ್ನು ಅಳವಡಿಸಲಾಗಿದೆ. ಹಾಳಾಗಿದ್ದ ಕಿಟಕಿಗಳನ್ನು ರಿಪೇರಿ ಮಾಡಿ ಮಸ್ಕಿಟೊ ಮೆಷ್ ಅನ್ನು ಅಳವಡಿಸಲಾಗಿದೆ. ಒಟ್ಟಾರೆ ಈ ಕಾಮಗಾರಿಗಳಿಗೆ ರೂ.10.79ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. ಅರಮನೆಯ ರಕ್ಷಣೆಗಾಗಿ 24/7 ವೇಳಾ ಅವಧಿಗೆ ಭದ್ರತಾ ಸಿಬ್ಬಂದಿಯನ್ನು ನೇಮಿಸಲಾಗಿದೆ. |
| ಇ. | ಪ್ರಸ್ತುತ ಸಾಲಿನಲ್ಲಿ ನಿರ್ವಹಣೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ಮಾಹಿತಿ ನೀಡುವುದು) | ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಯಾವುದೇ ಅನುದಾನವನ್ನು ನಿಗದಿ ಪಡಿಸಿಕೊಂಡಿರುವುದಿಲ್ಲ. |
| ಈ. | ಒಂದು ವೇಳೆ ರಾಜ್ಯ ಸರ್ಕಾರದ ಸುಪರ್ದಿಯಲ್ಲಿಲ್ಲದಿದ್ದಲ್ಲಿ, ಕೇಂದ್ರ ಸರ್ಕಾರಕ್ಕೆ ನಿರ್ವಹಣೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ? (ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಐಟಿವೈ 143 ಕೆಎಂಯು 84 ದಿನಾಂಕ: 13.04.1987ರಲ್ಲಿ ರಾಜ್ಯ ಸಂರಕ್ಷಿತ ಸ್ಮಾರಕವೆಂದು ಘೋಷಣೆಯಾಗಿರುವುದರಿಂದ ಕೇಂದ್ರ ಸರ್ಕಾರಕ್ಕೆ ನಿರ್ವಹಣೆಗೆ ಪ್ರಸ್ತಾವನೆಯನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ. |

ಸಂಖ್ಯೆ: ಕಸಂವಾ 88 ಕೆಎಂಯು 2018

ಡಾ. ಜಯಮಾಲ.
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯನಾಗರಿಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು